ದಿನಾಂಕಃ **06.03.2026**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಕೆ.ವಿ.ಎಸ್.ಕೆ. ವಕೀಲರಿಂದಃ

ದಾವಾ ಸ್ವತ್ತು ಕಮ್ಮತಾನಳ್ಳಿ ವ್ಯಾಪ್ತಿಯಲ್ಲಿ ಇರುತ್ತದೆ ಎಂದರೆ ಸರಿ. ನಾನು ಕಮ್ಮತಾನಹಳ್ಳಿಯಲ್ಲಿ ವಾಸವಿರುವುದಿಲ್ಲ ಎಂದರೆ ಸರಿ. ದಾವಾ ಸ್ವತ್ತು ಮೂಲತಃ ದೇವಿರಪ್ಪರವರಿಗೆ ಸೇರಿತ್ತು ಎಂದು ಸೂಚಿಸಿದ್ದಕ್ಕೆ ಸಾಕ್ಷಿ ಆನಂದಮ್ಮನವರಿಗೆ ಸೇರಿರುತ್ತದೆ ಎಂದು ಉತ್ತರಿಸುತ್ತಾರೆ. ದಾವಾ ಸ್ವತ್ತು ವಾದಿಗೆ ಹೇಗೆ ಬಂದಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಓ.ಎಸ್.ನಂ.110/1996 ರಲ್ಲಿ ಆದಂತಹ ಆದೇಶದ ಬಗ್ಗೆ ನನಗೆ ಗೊತ್ತಿರುವುದಿಲ್ಲ. ದೇವಿರಪ್ಪರವರು ಎಷ್ಟು ವರ್ಷಗಳ ಹಿಂದೆ ತೀರಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನಲ್ಲಿ ನಾನು ಕೂಲಿ ಕೆಲಸಕ್ಕೆ ಹೋಗುತ್ತಿದ್ದೇನು. ನಾನು ಸುಮಾರು 10-15 ವರ್ಷಗಳ ಹಿಂದೆ ದಾವಾ ಸ್ವತ್ತಿನಲ್ಲಿ ಕೂಲಿ ಕೆಲಸಕ್ಕೆ ಹೋಗಿರುತ್ತೇನೆ. ನಾನು ಕೊನೆಯದಾಗಿ ಸುಮಾರು 17 ವರ್ಷಗಳ ಹಿಂದೆ ಕೂಲಿ ಕೆಲಸಕ್ಕೆ ಹೋಗಿರುತ್ತೇನೆ.

2. 2 ರಿಂದ 9 ನೇ ಪ್ರತಿವಾದಿಗಳು ದಾವಾ ಸ್ವತ್ತನ್ನು ದಿಃ17.05.2018 ರಂದು 1 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ದಿಃ17.05.2018 ರಿಂದ 1 ನೇ ಪ್ರತಿವಾದಿ ದಾವಾ ಸ್ವತ್ತಿನ ಸ್ವಾಧೀನದಲ್ಲಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ. ದಾವಾ ಸ್ವತ್ತಿನ ಖಾತೆ ಮತ್ತು ಪಹಣಿಯನ್ನು ನಾನು ನೋಡಿರುವುದಿಲ್ಲ. ವಾದಿ ದಾವಾ ಸ್ವತ್ತಿನಲ್ಲಿ ಸ್ವಾಧೀನದಲ್ಲಿರುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.1 ನೇ ಪ್ರತಿವಾದಿ ದಾವಾ ಸ್ವತ್ತಿನಲ್ಲಿ

ಸ್ವಾಧೀನದಲ್ಲಿರುತ್ತಾರೆ ಎಂದು ಗೊತ್ತಿದ್ದರು ಸಹ ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ